# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 8ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು 560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ ಆರ್/ /2021-22 ದಿನಾಂಕ : 20.09.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/36/2020-21 ದಿ:21.09.2020 ರವರ ಆದೇಶದಂತೆ ದಿ:30-07-2022 ರಂದು ವಾರ್ಡ್ ನಂ.195-ಕೋಣನಕುಂಟೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಟಿ.ನಟರಾಜ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ಶಿಲ್ಪ.ಎನ್ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ಶೋಭಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಗೈರು ಹಾಜರಿರುತ್ತಾರೆ |
| 4 | ಶ್ರೀ ಶಿಲ್ಪ | ಕಂದಾಯ ಪರಿವೀಕ್ಷಕರು | |
| 5 | ಶ್ರೀ ಮೋಹನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 6 | ಶ್ರೀ ರಮೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ |
| 7 | ಶ್ರೀ ಅಕ್ಷಯ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 8 | ಶ್ರೀ ಮುಕುಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 9 | ಶ್ರೀ ರಾಮಚಂದ್ರ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 10 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |

### ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀ ಅನಂತಪದ್ಮನಾಭ | | ಹಾಜರಿರುತ್ತಾರೆ. |
| 2 | ಶ್ರೀ ಹೆಚ್.ರಮೇಶ್ ಭಟ್ | | ಹಾಜರಿರುತ್ತಾರೆ. |
| 3 | ಶ್ರೀ ಸಿ.ಎನ್.ರಾಜಸುಬ್ರಮಣ್ಯ | | ಹಾಜರಿರುತ್ತಾರೆ. |
| 4 | ಶ್ರೀ ನರಸಿಂಹ ಮೂರ್ತಿ | | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.195ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಟಿ.ನಟರಾಜ. ರವರು ದಿನಾಂಕ: 30-07-2022 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀಮತಿ ಶಿಲ್ಪ.ಎನ್ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**2. ಬೀದಿ ದೀಪಗಳ ನಿರ್ವಹಣೆ:-**

ವಾರ್ಡ್ ವ್ಯಾಪ್ತಿಯಲ್ಲಿನ ಸರ್ವೋದಯನಗರ ಹತ್ತಿರ ಬೀದಿ ದೀಪಗಳನ್ನು ತುರ್ತಾಗಿ ಅಳವಡಿಸಲು ಕೋರಿರುತ್ತಾರೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಿರುವ ಬೀದಿ ದೀಪಗಳಿಗೆ ಸ್ವಿಚ್ ಅನ್ನು ಅಳವಡಿಸಲು ಸಾರ್ವಜನಿಕರು ಕೋರಿರುವ ಮೇರೆಗೆ ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

Scanned with CamScanner

3. ಘನತ್ಯಾಜ್ಯ ನಿರ್ವಹಣೆ:-

ಕೊತ್ತನೂರು ಮತ್ತು ಶ್ರೇಯಸ್ ಕಾಲೋನಿಯಲ್ಲಿ ಘನತ್ಯಾಜ್ಯವನ್ನು ಪ್ರತ್ಯೇಕಗೊಳಿಸಿ ಸಾರ್ವಜನಿಕರಿಂದ ಸಮರ್ಪಕವಾಗಿ ಪಡೆದು ವಿಲೇವಾರಿ ಮಾಡಲಾಗುತ್ತಿದೆ ಎಂದು ಶ್ಲಾಘಿಸಿರುತ್ತಾರೆ.

ಖಾಲಿ ನಿವೇಶನದಲ್ಲಿ ಸಾರ್ವಜನಿಕರು ಘನತ್ಯಾಜ್ಯವನ್ನು ಬಿಸಾಡುತ್ತಿದ್ದು ಇವುಗಳನ್ನು ತೆರವುಗೊಳಿಸಿ ಮುಂದಿನ ದಿನಗಳಲ್ಲಿ ಸದರಿ ಬ್ಲಾಕ್ ಸ್ಪಾಟ್‌ಗಳಾಗದಂತೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬೆಂಗಳೂರು ದಕ್ಷಿಣ ರವರಿಗೆ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

4. ಉದ್ಯಾನವನ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಆರ್.ಬಿ.ಐ ಬಡಾವಣೆಯ ಪಾದಚಾರಿ ಮಾರ್ಗದ ಟೈಲ್ಸ್‌ಗಳು ಹಾಗೂ ಮುಂಭಾಗದ ಪ್ಲಾಜಾ ಹಾಳಾಗಿದ್ದು ಇದ್ದುನ್ನು ಸರಿಪಡಿಸಲು ತೋಟಗಾರಿಕೆ ಅಧಿಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ)

ವಾರ್ಡ್ ವ್ಯಾಪ್ತಿಯ ಮಾರುತಿ ಬಡಾವಣೆ ರಸ್ತೆಯಲ್ಲಿರುವ ಒಳಚರಂಡಿ ಮ್ಯಾನ್ ಹೋಲ್‌ಗಳನ್ನು ರಸ್ತೆ ಮಟ್ಟಕ್ಕೆ ಸಮತಟ್ಟು ಮಾಡಲು ಕೋರಿರುತ್ತಾರೆ. ಶ್ರೇಯಸ್ ಕಾಲೋನಿ ಬಳಿಯ ಒಳಚರಂಡಿ ಪೈಪ್‌ಗಳು ಹಾಳಾಗಿದ್ದು ಇವುಗಳನ್ನು ಬದಲಾಯಿಸಿ ಹೊಸ ಪೈಪ್‌ಗಳನ್ನು ಅಳವಡಿಸಲು ಕೋರಿರುತ್ತಾರೆ. ನವೋದಯನಗರ ಹಾಗೂ ಶ್ರೇಯಸ್ ಕಾಲೋನಿಯಲ್ಲಿ ಮಳೆ ಬಂದಾಗಲೆಲ್ಲಾ ಒಳಚರಂಡಿ ನೀರು ಮ್ಯಾನ್ ಹೋಲ್ ನಿಂದ ಹೊರ ಹರಿಯುತ್ತಿದ್ದು ಇದರಿಂದಾಗಿ ಸಾರ್ವಜನಿಕರ ಆರೋಗ್ಯ ಮೇಲೆ ದುಷ್ಪರಿಣಾಮ ಬೀರುವ ಸಂಭವ ವಿರುತ್ತದೆ ಎಂದು ದೂರರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ)

ವಾರ್ಡ್ ವ್ಯಾಪ್ತಿಯ ಹರಿನಗರ, ಶ್ರೀನಿಧಿ ಬಡಾವಣೆ ಹಾಗೂ ಇತರೆ ಪ್ರದೇಶಗಳಲ್ಲಿ ಹೊಸದಾಗಿ ಅಂತರ್ಗತ ಕೇಬಲ್‌ಗಳನ್ನು ಅಳವಡಿಸುತ್ತಿದ್ದು ಹಾಗೂ ಚೇಂಬರ್‌ಗಳನ್ನು ನಿರ್ಮಿಸುತ್ತಿದ್ದು ಸದರಿ ಚೇಂಬರ್‌ಗಳು ರಸ್ತೆಯಿಂದ ಸುಮಾರು 5 ರಿಂದ 6 ಮೇಲೆ ಇರುವುದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಅಪಘಾತಕ್ಕೆ ಒಳಪಡುವ ಸಂಭವವಿರುತ್ತದೆ ಎಂದು ಸಾರ್ವಜನಿಕರು ದೂರಿರುತ್ತಾರೆ.

ಶ್ರೀನಿಧಿ ಬಡಾವಣೆಯಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ಮರದ ರೆಂಬೆಗಳನ್ನು ಕತ್ತರಿಸಿ ಬಡಾವಣೆಯ ಖಾಲಿ ನಿವೇಶನಗಳಲ್ಲಿ ಹಾಕಿ ಹೋಗಲಾಗಿರುತ್ತದೆ ಎಂದು ದೂರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

8. ಬಿಬಿಎಂಪಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ)

ವಾರ್ಡ್ ವ್ಯಾಪ್ತಿಯ ಶ್ರೀನಿಧಿ ಬಡಾವಣೆಯಲ್ಲಿ ಸಾರ್ವಜನಿಕರು ಕೋರಿರುವಂತೆ ರಸ್ತೆ ಬದಿ ಚರಂಡಿಗೆ ಕಲ್ಲು ಚಪ್ಪಡಿಗಳನ್ನು ಅಳವಡಿಸಿರುವ ಬಗ್ಗೆ ಶ್ರೀನಿಧಿ ಬಡಾವಣೆಯ RWA ರವರು ಶ್ಲಾಘಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯ ಸಂತೃಪ್ತಿನಗರ ಮತ್ತು ಉಳಿದ ರಸ್ತೆಗಳಿಗೆ ಡಾಂಬರೀಕರಣ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಕೋರಿರುತ್ತಾರೆ, ಉದ್ಯಾನವನದ ಮುಂಭಾಗದಲ್ಲಿ ಕಲ್ಲು ಚಪ್ಪಡಿಯನ್ನು ಅಳವಡಿಸಲು ಕೋರಿರುತ್ತಾರೆ ಹಾಗೂ ಬಡಾವಣೆಯ ರಸ್ತೆ ಬದಿ ಚರಂಡಿಗಳಲ್ಲಿ ಬಾಕಿ ಇರುವ ಹೂಳನ್ನು ತೆರವುಗೊಳಿಸಲು ಕೋರಿರುತ್ತಾರೆ ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಬಡಾವಣೆಯ ಪೂರ್ವ ಭಾಗದಲ್ಲಿ ಈಗಾಗಲೇ ಡಾಂಬರೀಕರಣ ಪೂರ್ಣಗೊಂಡಿರುತ್ತದೆ, ಮಧ್ಯ ಭಾಗದ ಬಡಾವಣೆಯಲ್ಲಿ BWSSB ವತಿಯಿಂದ ಅಗೆದಿದ್ದ ರಸ್ತೆ ಭಾಗಗಳಿಗೆ ಡಾಂಬರೀಕರಣ ಮಾಡಲು Wet Mix ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಎಂದು ತಿಳಿಸಿರುತ್ತಾರೆ.

ಈಶ್ವರ ಲೇಔಟ್ ಮುಖ್ಯ ರಸ್ತೆಯಿಂದ ಚುಂಚಘಟ್ಟ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆಯು ಹಾಳಾಗಿದ್ದು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿದ್ದು ರಸ್ತೆಗೆ ಡಾಂಬರೀಕರಣ ಮಾಡಲು ಕೋರಿರುತ್ತಾರೆ.

Scanned with CamScanner

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಟಿ.ನಟರಾಜ ರವರು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.195 ಕೋಣನಕುಂಟೆ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.195 ಕೋಣನಕುಂಟೆ

Scanned with CamScanner